ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1532
ಉತ್ತರಿಸಬೇಕಾದ ದಿನಾಂಕ	:	24.09.2021.
ಸದಸ್ಯರ ಹೆಸರು	:	ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು	:	ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕ್ರೀಡಾ ಇಲಾಖೆಗೆ ಕೇಂದ್ರದಿಂದ ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಯೋಜನೆಗಳಾವುವು; (ವಿವರಗಳನ್ನು ಒದಗಿಸುವುದು)	2018-19ನೇ ಸಾಲಿನಲ್ಲಿ ಹುಬ್ಬಳ್ಳಿ- ಧಾರವಾಡ ಜಿಲ್ಲೆಯಲ್ಲಿ ಬಹು ಉದ್ದೇಶಿತ ಒಳಾಂಗಣ ಕ್ರೀಡಾಂಗಣ ನಿರ್ಮಾಣ ಮಾಡಲು ರೂ. 800.00 ಲಕ್ಷಗಳಿಗೆ ಮಂಜೂರಾತಿ ನೀಡಿ ರೂ. 300.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. 2019-20 ನೇ ಸಾಲಿನಲ್ಲಿ ಯಾವುದೇ ಯೋಜನೆಗಳು ಮಂಜೂರು ಮಾಡಿರುವುದಿಲ್ಲ. 2020-21ನೇ ಸಾಲಿನಲ್ಲಿ ಖೇಲೋ ಇಂಡಿಯಾ ಸ್ಟೇಟ್ ಸೆಂಟರ್ ಆಫ್ ಎಕ್ಸಲೆನ್ಸ್‌ನ ಕಾರ್ಯಾಚರಣೆಗೆ ರೂ. 219.27 ಲಕ್ಷ ಅನುದಾನ ಹಂಚಿಕೆ ಮಾಡಲಾಗಿದೆ ಮತ್ತು ರೂ.1,01,89,800/- ಅನುದಾನವನ್ನು ಭಾರತ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಮಂತ್ರಾಲಯ ವತಿಯಿಂದ ಬಿಡುಗಡೆ ಮಾಡಲಾಗಿದೆ. ಮುಂದುವರೆದು, ಸದರಿ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲಾ ಕ್ರೀಡಾಂಗಣದಲ್ಲಿ ರೂ. 4.50 ಕೋಟಿಗಳ ವಿವಿದೋದ್ದೇಶ ಒಳಾಂಗಣ ಹಾಲ್ ನಿರ್ಮಾಣ; ಚಿಕ್ಕಮಗಳೂರು ಜಿಲ್ಲಾ ಕ್ರೀಡಾಂಗಣದಲ್ಲಿ ರೂ. 7.00 ಕೋಟಿಗಳ ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್; ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ರೂ. 4.50 ಕೋಟಿಗಳ ವಿವಿದೋದ್ದೇಶ ಹಾಲ್ ನಿರ್ಮಾಣ; ಉಡುಪಿ ಜಿಲ್ಲೆಯ ಕಾರ್ಕಳ ನಗರದಲ್ಲಿ ರೂ. 3.50 ಕೋಟಿಗಳ ಕ್ರೀಡಾ ಸಂಕೀರ್ಣ ನಿರ್ಮಾಣ ಹಾಗೂ ಉಡುಪಿ ಜಿಲ್ಲಾ ಕ್ರೀಡಾಂಗಣದಲ್ಲಿ ರೂ. 2.32 ಕೋಟಿಗಳ Construction of Tensile structural roofing and Construction of gallery roofing ಕಾಮಗಾರಿಗಳಿಗೆ ಮಂಜೂರಾತಿ ನೀಡಿದ್ದು, ಈ ಪೈಕಿ ಚಿಕ್ಕಮಗಳೂರು ಹಾಗೂ ಕೊಪ್ಪಳ ಜಿಲ್ಲೆಗಳ ಕಾಮಗಾರಿಗಳ ಸಂಬಂಧಿಸಿದ ದಾಖಲಾತಿಗಳನ್ನು ಭಾರತ ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ.

ಆ)	ಕೋವಿಡ್-19 ನಿಂದಾಗಿ ಯೋಜನೆಗಳ ಮೇಲೆ ಪರಿಣಾಮ ಬೀರಿದೆಯೇ;	ಹೌದು, ಕೋವಿಡ್ ನಿಂದಾಗಿ ಕಾಮಗಾರಿ ಅನುಷ್ಠಾನಗೊಳಿಸುವಲ್ಲಿ ವಿಳಂಬವಾಗಿರುತ್ತದೆ.
ಇ)	2021-22ನೇ ಸಾಲಿನಲ್ಲಿ ಹಮ್ಮಿಕೊಂಡಿರುವ ಯೋಜನೆಗಳಾವುವು?(ಮಾಹಿತಿ ನೀಡುವುದು)	ಭಾರತ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಮಂತ್ರಾಲಯ ವತಿಯಿಂದ ರಾಜ್ಯದಲ್ಲಿ 2021-22 ನೇ ಸಾಲಿಗೆ 31 ಸಣ್ಣ ಖೇಲೋ ಇಂಡಿಯಾ ಕೇಂದ್ರಗಳಿಗೆ ಮಂಜೂರಾತಿ ನೀಡಿ ರೂ. 2.17 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ವೈಎಸ್‌ಡಿ/ಇಬಿಬಿ/164/2021

(ಡಾ. ನಾರಾಯಣಗೌಡ)
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.